ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ರಸ್ತೆಗಳ ಬಗ್ಗೆ

ಶ್ರೀ ಬಿ. ಜಿ. ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

916 (971) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ;

(ಆ) ಎಷ್ಟು ಕಿ.ಮೀಟರ್ ರಸ್ತೆಗಳನ್ನು ಅಭಿವೃದ್ಧಿ ಮಾಡಲಾಗಿದೆ; ಎಷ್ಟು ಹಣ ಬಿಡುಗಡೆಯಾಗಿದೆ ಮತ್ತು ಎಷ್ಟು ಹಣ ಖರ್ಚು ಮಾಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)